ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಶಾಖೆ / ವಿಷಯ : DEPARTMENT / SUBJECT: ಸಚಿವರು

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ

ದಿನಾಂಕ : DATE : 2/4/21

# ಬಿಜೆಪಿಗೆ ತ್ರಾಪತ್ರಯ

## ಸಿಎಂ ಯಡಿಯೂರಪ್ಪ ಪರ ನಿಂತ ಸಚಿವರು, ಶಾಸಕರು
## ಈಶ್ವರಪ್ಪ ವಿರುದ್ಧ ವರಿಷ್ಠರಿಗೆ ದೂರು ನೀಡಲು ಚಿಂತನೆ

ಬೆಂಗಳೂರು: ಮುಖ್ಯಮಂತ್ರಿ ಯಡಿಯೂರಪ್ಪ ವಿರುದ್ಧ ಗ್ರಾಮೀಣಾಭಿವೃದ್ಧಿ ಸಚಿವ ಕೆ.ಎಸ್. ಈಶ್ವರಪ್ಪ ರಾಜ್ಯಪಾಲರಿಗೆ ಮತ್ತು ಹೈಕಮಾಂಡ್‌ಗೆ ನೀಡಿದ ದೂರು, ಗುರುವಾರ ರಾಜ್ಯ ರಾಜಕಾರಣದಲ್ಲಿ ಕಂಪನ ತಂದಿಟ್ಟಿದೆ.

ಈ ಬೆಳವಣಿಗೆ ಆಡಳಿತ ಪಕ್ಷಕ್ಕೆ ಮುಜುಗರ ತಂದಿದ್ದರೆ, ಪ್ರತಿಪಕ್ಷ ಕಾಂಗ್ರೆಸ್ ಸರ್ಕಾರದ ವಜಾಕ್ಕೆ ಒತ್ತಾಯಿಸಿವೆ. ಹಾಗೆಯೇ ಈಶ್ವರಪ್ಪ ನಡೆ ವಿರುದ್ಧ ಬಿಎಸ್‌ವೈ ಬೆಂಬಲಿಗ ಸಚಿವರು ಮತ್ತು ಶಾಸಕರು ಬಹಿರಂಗವಾಗಿಯೇ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಹೈಕಮಾಂಡ್‌ಗೆ ದೂರು ನೀಡಲೂ ಚಿಂತನೆ ನಡೆಸಿದ್ದಾರೆ.

ಇನ್ನು ಕರ್ನಾಟಕ ಬಿಜೆಪಿ ಉಸ್ತುವಾರಿ ಅರುಣ್ ಸಿಂಗ್ ಕೂಡ, ಈಶ್ವರಪ್ಪ ಅವರ ನಡೆಯನ್ನು ಒಪ್ಪಿಲ್ಲ. ದೆಹಲಿಯಲ್ಲಿ ಮಾಧ್ಯಮ ಪ್ರತಿನಿಧಿಗಳ ಜತೆ ಮಾತನಾಡಿದ ಅವರು, ಈಶ್ವರಪ್ಪ ಅವರು ಪಕ್ಷದ ವೇದಿಕೆಯಲ್ಲೇ ಬಗೆಹರಿಸಿಕೊಳ್ಳಬೇಕಿತ್ತು. ಇದನ್ನು ಬಹಿರಂಗಗೊಳಿಸುವ ಅಗತ್ಯವಿರಲಿಲ್ಲ ಎಂದಿದ್ದಾರೆ.

ಈಶ್ವರಪ್ಪ ನಡೆಯ ಹಿಂದೆ ರಾಜ್ಯ ಮಟ್ಟದ ಹಾಗೂ ಹೈಕಮಾಂಡ್‌ನಲ್ಲಿ ಯಾರದ್ದಾದರೂ ಬೆಂಬಲ ಇದೆಯಾ ಎನ್ನುವ ಬಗ್ಗೆಯೂ ಸಿಎಂ ಬೆಂಬಲಿಗರ ಸಭೆಯಲ್ಲಿ ಚರ್ಚೆಯಾಗಿದೆ. ▶ 10ನೇ ಪುಟಕ್ಕೆ

### ಹೈಕಮಾಂಡ್ ಬೆಂಬಲದ ಗುಮಾನಿ?

ಮುಖ್ಯಮಂತ್ರಿ ವಿರುದ್ಧ ಆಗಾಗ ಬಂಡಾಯ ಸಾರುತ್ತಲೇ ಇರುವ ಸಚಿವ ಕೆ.ಎಸ್. ಈಶ್ವರಪ್ಪ ಏಕಾಏಕಿ ಈ ರೀತಿಯ ನಿರ್ಧಾರ ತೆಗೆದುಕೊಂಡಿರುವುದರ ಹಿಂದೆ ಪಕ್ಷದ ಕೆಲವು ರಾಷ್ಟ್ರೀಯ ನಾಯಕರ ಬೆಂಬಲ ಇರಬಹುದು ಎಂಬ ಚರ್ಚೆ ಬಿಜೆಪಿ ವಲಯದಲ್ಲಿ ಕೇಳಿ ಬರುತ್ತಿದೆ. ಮುಖ್ಯಮಂತ್ರಿ ಯಡಿಯೂರಪ್ಪ ಅವರನ್ನು ಪದಚ್ಯುತಗೊಳಿಸಬೇಕೆಂಬ ಬೇಡಿಕೆಗೆ ಮರುಜೀವ ತುಂಬಲು ಈ ರೀತಿಯ ಪ್ರಯತ್ನ ನಡೆಸಲಾಗುತ್ತಿದೆ ಎಂಬ ಮಾತುಗಳು ಕೇಳಿಬರುತ್ತಿವೆ. ವಿಜಯಪುರ ಶಾಸಕ ಬಸನಗೌಡ ಯತ್ನಾಳ್ ನಿರಂತರವಾಗಿ ಮುಖ್ಯಮಂತ್ರಿ ವಿರುದ್ಧ ಹೇಳಿಕೆ ನೀಡುತ್ತಿದ್ದು, ಅದಕ್ಕೆ ಪೂರಕ ಎನ್ನುವಂತೆ ಯಡಿಯೂರಪ್ಪ ಅವರ ಸಂಪುಟದ ಸಚಿವರಿಂದಲೇ ಅವರ ವಿರುದ್ಧ ಬಂಡಾಯದ ಕಹಳೆ ಮೊಳಗಿಸುವ ಮೂಲಕ ಮುಖ್ಯಮಂತ್ರಿ ವಿರೋಧಿ ಶಕ್ತಿಯನ್ನು ಬಲಗೊಳಿಸುವ ಪ್ರಯತ್ನ ಇದಾಗಿದೆ ಎಂಬ ಚರ್ಚೆಗಳು ನಡೆಯುತ್ತಿವೆ.



### ಖಾಸಗಿ ಹೋಟೆಲ್‌ನಲ್ಲಿ ಸಭೆ

ಯಡಿಯೂರಪ್ಪ ಅವರನ್ನು ಭೇಟಿ ಮಾಡಿ ಮಾಧ್ಯಮಗಳೊಂದಿಗೆ ಮಾತನಾಡಿದ ನಂತರ ಸಚಿವರು ಖಾಸಗಿ ಹೋಟೆಲ್‌ನಲ್ಲಿ ಭೋಜನಕ್ಕೆ ಸೇರಿಕೊಂಡಿದ್ದು, ಅಲ್ಲಿಯೂ ಸುಮಾರು ಒಂದು ಗಂಟೆಗಳ ಕಾಲ ಚರ್ಚೆ ನಡೆಸಿದ್ದಾರೆ ಎಂದು ತಿಳಿದು ಬಂದಿದೆ.

> ಈಶ್ವರಪ್ಪ ಸಿಎಂ ಜತೆಗೆ ಚರ್ಚೆ ನಡೆಸಿ ಸಮಸ್ಯೆ ಬಗೆಹರಿಸಬಹುದಿತ್ತು. ಬಹಿರಂಗವಾಗಿ ಈ ಬಗ್ಗೆ ಮಾತನಾಡಬೇಕಿರಲಿಲ್ಲ.
>
> • ಅರುಣ್ ಸಿಂಗ್, ಬಿಜೆಪಿ ರಾಜ್ಯ ಉಸ್ತುವಾರಿ.

> ಇಲಾಖೆ ಬಗ್ಗೆ ರಾಜ್ಯಪಾಲರ ಗಮನಕ್ಕೆ ತರಬೇಕಿತ್ತು, ತಂದಿದ್ದೇನೆ. ಅದರಲ್ಲಿ ತಪ್ಪೇನೂ ಇಲ್ಲ. ಇದಕ್ಕೆ ಮಹತ್ವ ಕೊಡುವ ಅಗತ್ಯವಿಲ್ಲ.
>
> • ಕೆ.ಎಸ್.ಈಶ್ವರಪ್ಪ, ಗ್ರಾಮೀಣಾಭಿವೃದ್ಧಿ ಸಚಿವ

> ಭ್ರಷ್ಟಾಚಾರ, ಸ್ವಜನಪಕ್ಷಪಾತಗಳ ಬಗ್ಗೆ ನಾನು ಮಾಡಿದ್ದ ಆರೋಪಗಳಿಗೆ ಸಾಕ್ಷ್ಯ ನೀಡಿದ್ದಾರೆ ಈಶ್ವರಪ್ಪ. ರಾಜ್ಯದಲ್ಲಿ ರಾಷ್ಟ್ರಪತಿ ಆಡಳಿತಕ್ಕೆ ಶಿಫಾರಸು ಮಾಡಬೇಕು.
>
> • ಸಿದ್ದರಾಮಯ್ಯ, ಪ್ರತಿಪಕ್ಷ ನಾಯಕ

10

# ಬಿಜೆಪಿಗೆ ತಾಪತ್ರಯ

2/4/21

**1ನೇ ಪುಟದಿಂದ ▶ ನಾಲ್ವರು ಸಚಿವರ ಬೆಂಬಲ:** ಸಿಎಂ ಬಿಎಸ್‌ವೈ ಅವರನ್ನು ಗೃಹ ಕಚೇರಿ ಕೃಷ್ಣಾದಲ್ಲಿ ಗೃಹ ಮತ್ತು ಕಾನೂನು ಸಚಿವ ಬಸವರಾಜ್ ಬೊಮ್ಮಾಯಿ, ಕಂದಾಯ ಸಚಿವ ಆರ್. ಅಶೋಕ್, ಕೃಷಿ ಸಚಿವ ಬಿ.ಸಿ. ಪಾಟೀಲ್ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಡಾ.ಕೆ. ಸುಧಾಕರ್ ಭೇಟಿ ಮಾಡಿ ಸುಮಾರು ಎರಡು ಗಂಟೆಗಳ ಕಾಲ ಚರ್ಚೆ ನಡೆಸಿದರು. ಈಶ್ವರಪ್ಪ ನಡೆಯಿಂದ ಸಂಪುಟದಲ್ಲಿ ಎಲ್ಲವೂ ಸರಿಯಿಲ್ಲ ಎಂಬ ಭಾವನೆ ಮೂಡುವಂತಾಗಿದೆ. ಉಪ ಚುನಾವಣೆ ಸಂದರ್ಭದಲ್ಲಿ ಈ ರೀತಿಯ ಬೆಳವಣಿಗೆ ಪ್ರತಿಪಕ್ಷಗಳಿಗೆ ನಾವೇ ಆಹಾರ ಒದಗಿಸಿಕೊಟ್ಟಂತಾಗುತ್ತದೆ. ಇದರಿಂದ ಸರ್ಕಾರ ಬಗ್ಗೆ ಕೆಟ್ಟ ಜನರಿಗೆ ಅಭಿಪ್ರಾಯ ಮೂಡಲು ಕಾರಣವಾಗುತ್ತದೆ ಎಂಬ ಅಭಿಪ್ರಾಯ ಸಭೆಯಲ್ಲಿ ವ್ಯಕ್ತವಾಗಿದೆ ಎಂದು ತಿಳಿದು ಬಂದಿದೆ.

ಸಿಎಂ ಯಡಿಯೂರಪ್ಪ ಅವರ ಜೊತೆ ಚರ್ಚೆಯ ನಂತರ ನಾಲ್ವರೂ ಸಚಿವರು ಮಾಧ್ಯಮಗಳೊಂದಿಗೆ ಮಾತನಾಡಿದ್ದು ಸಚಿವ ಕೆ.ಎಸ್.ಈಶ್ವರಪ್ಪ ಅವರು ಹಿರಿಯರಾಗಿ ಪಕ್ಷದ ವೇದಿಕೆ ಹಾಗೂ ಸಂಪುಟದಲ್ಲಿ ಚರ್ಚಿಸಬೇಕಾದ ವಿಷಯಗಳನ್ನು ಬಹಿರಂಗಗೊಳಿಸಿರುವುದು ಹಾಗೂ ರಾಜ್ಯಪಾಲರ ವರೆಗೆ ಹೋಗಿರುವುದು ಒಳ್ಳೆಯ ಬೆಳವಣಿಗೆಯಲ್ಲ ಎಂದು ಆಕ್ಷೇಪಿಸಿದರು. ಏನಾದರೂ ಭಿನ್ನಾಭಿಪ್ರಾಯ ಇದ್ದರೆ ನೇರವಾಗಿ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಚರ್ಚೆ ಮಾಡಬಹುದಿತ್ತು. ಈಗಲೂ ಅವರು ತಮ್ಮ ಸಮಸ್ಯೆಯನ್ನು ನಾಲ್ಕು ಗೋಡೆಯ ಮಧ್ಯೆ ಕುಳಿತು ಚರ್ಚಿಸಿ ಬಗೆ ಹರಿಸಿಕೊಳ್ಳಬೇಕು ಎಂದು ಮನವಿ ಮಾಡಿಕೊಂಡಿದ್ದಾರೆ. ಸಚಿವರ ಬೆಂಬಲದ ಜೊತೆಗೆ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಎಂ.ಪಿ.ರೇಣುಕಾಚಾರ್ಯ ನೇತೃತ್ವದಲ್ಲಿ ಎ.ಎಸ್. ಪಾಟೀಲ್ ನಡಹಳ್ಳಿ, ಅರುಣ್ ಕುಮಾರ ಪೂಜಾರಿ, ಮಹಾದೇವಪ್ಪ ಯಾದವಾಡ ಸೇರಿದಂತೆ ಹತ್ತಕ್ಕೂ ಹೆಚ್ಚು ಶಾಸಕರು ಯಡಿಯೂರಪ್ಪ ಜತೆಗೆ ಚರ್ಚಿಸಿದ್ದಾರೆ.

**ನಾವು ಯಡಿಯೂರಪ್ಪ ನೇತೃತ್ವದಲ್ಲಿ ಚುನಾವಣೆಗೆ ಹೋಗಿ ನಂತರ ಅಧಿಕಾರಕ್ಕೆ ಬಂದಿದ್ದೇವೆ. ಪಕ್ಷದ ಆಂತರಿಕ ವಿಚಾರ ನಾಲ್ಕು ಗೋಡೆಗಳ ಮಧ್ಯ ಇರಬೇಕು. ಈ ಬೆಳವಣಿಗೆ ಒಳ್ಳೆಯದಲ್ಲ.**

• **ಆರ್.ಅಶೋಕ,** ಕಂದಾಯ ಸಚಿವ